**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**ಸಿ.ಸಿ.ನಂ. 1197/2019**

| | | |
|---|---|---|
| ಸಾಕ್ಷಿದಾರರ ಹೆಸರು | : | ಡಾ. ಹರಿಪ್ರಸಾದ್ |
| ತಂದೆಯ ಹೆಸರು | : | ಚೆಲುವೇಗೌಡ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ಮೂಳೆ ತಜ್ಞರು, ಸಾರ್ವಜನಿಕ ಆಸ್ಪತ್ರೆ, ನಂಜನಗೂಡು. |
| ವಾಸಸ್ಥಳ | : | ನಂಜನಗೂಡು. |

**ಸಾಕ್ಷಿಯನ್ನು ದಿನಾಂಕಃ 15.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2013 ರಿಂದ ಇಲ್ಲಿಯವರೆಗೂ ನಂಜನಗೂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಮೂಳೆ ತಜ್ಞರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 25.04.2019 ರಂದು ನಾನು ಆಸ್ಪತ್ರೆಯಲ್ಲಿರುವಾಗ ಫ್ರಾಸಾ-1ರವರು ಫ್ರಾಸಾ-5ರವರ ಜೊತೆ ಹಲ್ಲೆಯ ಇತಿಹಾಸದೊಂದಿಗೆ ಆಸ್ಪತ್ರೆಗೆ ಬಂದಿದ್ದು, ಅವರನ್ನು ಪರೀಕ್ಷೆ ಮಾಡಿ ನೋಡಲಾಗಿ, ತಲೆಯ ಮುಂಭಾಗದಲ್ಲಿ ಮತ್ತು ಎಡಗೈಯಲ್ಲಿ ನೋವು ಮತ್ತು ಮುಟ್ಟಿದಾಗ ನೋವು ಇತ್ತು (Pain and tenderness over left forearm and head). ನಾನು ಈ ಬಗ್ಗೆ ಗಾಯದ ಪ್ರಮಾಣಪತ್ರ ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣಪತ್ರವನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-4** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-4(ಎ)** ಎಂದು ಗುರುತಿಸಲಾಯಿತು. ಒಬ್ಬ ವ್ಯಕ್ತಿ ದೊಣ್ಣೆಯಿಂದ ಹಲ್ಲೆ ಮಾಡಿದಾಗ ನಿಪಿ-4 ರಲ್ಲಿ ನಮೂದಿಸಿರುವ ಗಾಯಗಳಾಗುವ ಸಾಧ್ಯತೆಗಳಿರುತ್ತವೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ ಎ.ಪಿ.ಎಂ.ಬಿ, ವಕೀಲರಿಂದಃ**

ಯಾವುದೇ ಒಬ್ಬ ವ್ಯಕ್ತಿ ಗಟ್ಟಿಯಾದ ನೆಲದ ಮೇಲೆ ಬಿದ್ದಾಗ ನಿಪಿ-4 ರಲ್ಲಿ ನಮೂದಿಸಿರುವ ಗಾಯಗಳಾಗುವ ಸಾಧ್ಯತೆಗಳಿರುತ್ತವೆ ಎಂದರೆ ಸರಿ.

**ಮರು ವಿಚಾರಣೆಃ** ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**

**ನಂಜನಗೂಡು.**